**ಕರ್ನಾಟಕ ವಿಧಾನ ಪರಿಷತ್**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1039 |
| ಸದಸ್ಯರ ಹೆಸರು | : ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ದಿನಾಂಕ | : 22.09.2022 |
| ಉತ್ತರಿಸುವ ಸಚಿವರು | : ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಹೊರ್ತಿ-ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಗೆ ಸರ್ಕಾರದಿಂದ ಡಿಪಿಆರ್ ಸಿದ್ದವಾಗಿದೆಯೇ; | ಹೌದು. |
| ಆ) | ಈ ಯೋಜನೆಗೆ ತಗಲುವ ವೆಚ್ಚ ಎಷ್ಟು; (ಸಂಪೂರ್ಣ ವಿವರ ನೀಡುವುದು) | ವಿಜಯಪುರ ಜಿಲ್ಲೆಯ ಇಂಡಿ ಮತ್ತು ವಿಜಯಪುರ ತಾಲ್ಲೂಕುಗಳ (ನಾಗಠಾಣ ಮತಕ್ಷೇತ್ರ ಒಳಗೊಂಡಂತೆ) 28,000 ಹೆಕ್ಟೇರ್ ಕ್ಷೇತ್ರಕ್ಕೆ ಆಲಮಟ್ಟಿ ಜಲಾಶಯದ ಹಿನ್ನೀರಿನಿಂದ ನೀರನ್ನು ಎತ್ತಿ ನೀರಾವರಿ ಸೌಲಭ್ಯ ಕಲ್ಪಿಸುವ ಹೊರ್ತಿ-ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯ ರೂ.2638.00 ಕೋಟಿ ಅಂದಾಜು ಮೊತ್ತದ (2018-19ನೇ ಸಾಲಿನ ದರಪಟ್ಟಿರನ್ವಯ) ಯೋಜನಾ ವರದಿಗೆ ದಿನಾಂಕ:07.09.2022 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. |
| ಇ) | ಈ ಯೋಜನೆಯಿಂದ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟು ಎಕರೆ ಜಮೀನು ನೀರಾವರಿಯಾಗಲಿದೆ? (ಸಂಪೂರ್ಣ ವಿವರ ನೀಡುವುದು) | ಹೊರ್ತಿ-ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯಿಂದ 43 ಹಳ್ಳಿಗಳಿಗೆ ನೀರಾವರಿ ಸೌಲಭ್ಯ ಒದಗಿಸಲು ಯೋಜಿಸಲಾಗಿದ್ದು, ಸದರಿ ಯೋಜನೆಯ ವಿವರವಾದ ಸರ್ವೆ ಕಾರ್ಯವನ್ನು ಕೈಗೊಂಡ ನಂತರ ಗ್ರಾಮವಾರು ಹಾಗೂ ತಾಲ್ಲೂಕುವಾರು ನೀರಾವರಿ ಪ್ರದೇಶದ ವಿವರಗಳು ಲಭ್ಯವಾಗುವುವು. |

ಜಸಂಇ 116 ಡಬ್ಲ್ಯೂಬಿಎಂ 2022

(ಗೋವಿಂದ ಎಂ.ಕಾರಜೋಳ)
ಜಲಸಂಪನ್ಮೂಲ ಸಚಿವರು